# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2089 (2367) |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ. ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 27/03/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿರುವ ಕಲ್ಯಾಣ ಯೋಜನೆಗಳ ಕಾರ್ಯಕ್ರಮಗಳು ಯಾವುವು: (ಮಾಹಿತಿ ಒದಗಿಸುವುದು) | **<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಗೆ 2023-24 ಮತ್ತು 2024-25ನೇ ಸಾಲಿನಲ್ಲಿ ಸಂಘಟಿತ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ. 40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಂದ ರೂ.20/- ರಂತೆ ಹಾಗೂ 2025-26ನೇ ಸಾಲಿನಲ್ಲಿ ಕಾರ್ಮಿಕರಿಂದ ರೂ. 50/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ. 100/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಂದ ರೂ. 50/- ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಆ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>1. ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನಸಹಾಯ<br>2. ಕಾರ್ಮಿಕರಿಗೆ ವೈದ್ಯಕೀಯ ನೆರವು<br>3. ಕಾರ್ಮಿಕರಿಗೆ ಅಪಘಾತ ಧನಸಹಾಯ<br>4. ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ<br>5. ಮೃತ ಕಾರ್ಮಿಕನ ಅಂತ್ಯಸಂಸ್ಕಾರಕ್ಕೆ ಧನಸಹಾಯ<br>6. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ<br>7. ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ |

| | | |
|---|---|---|
| ಆ) | ಈ ಯೋಜನೆಗಳನ್ನು ಕೇವಲ ಕಟ್ಟಡ ಕಾರ್ಮಿಕರಿಗೆ ಮಾತ್ರ ನೀಡಲಾಗುತ್ತಿ ದೆಯೋ ಅಥವಾ ಇತರೆ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರಿಗೂ ಈ ಯೋಜನೆಯನ್ನು ನೀಡಲಾಗುತ್ತಿದೆಯೋ ಎಂಬ ಬಗ್ಗೆ ಮಾಹಿತಿ ಒದಗಿಸುವುದು; | ಈ ಯೋಜನೆಗಳನ್ನು ಕಟ್ಟಡ ಕಾರ್ಮಿಕರ ಜೊತೆಗೆ ಈ ಕೆಳಕಂಡ ಮಂಡಳಿಗಳಲ್ಲಿ ನೋಂದಾಯಿತರಾದ ಕಾರ್ಮಿಕರಿಗೂ ನೀಡಲಾಗುತ್ತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಈ ಮಂಡಳಿಯಿಂದ ನೀಡಲಾಗುವ ವಿವಿಧ ಸೌಲಭ್ಯಗಳ ವಿವರಗಳನ್ನು **<u>ಅನುಬಂಧ</u>ದಲ್ಲಿ** ಒದಗಿಸಿದೆ.<br>ಮಂಡಳಿಯ ಯೋಜನೆಗಳನ್ನು ಕೇವಲ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮಾತ್ರ ನೀಡಲಾಗುತ್ತಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ವಿವಿಧ ಯೋಜನೆಗಳಡಿ ಸೌಲಭ್ಯಗಳನ್ನು ಒದಗಿಸುತ್ತಿದ್ದು, ವಿವರ ಈ ಕೆಳಕಂಡಂತಿದೆ.<br><br>• **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:**<br><br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>**(ಅ) ಅಪಘಾತ ಪರಿಹಾರ:**<br>ಅಪಘಾತದಿಂದ ಮೃತರಾದ ಪ್ರಕರಣಗಳಲ್ಲಿ ಅವರ ನಾಮನಿರ್ದೇಶಿತರಿಗೆ ರೂ. **5.00** ಲಕ್ಷಗಳ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.**2.00** ಲಕ್ಷಗಳವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.**1.00** ಲಕ್ಷದವರೆಗೆ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗುತ್ತಿದೆ.<br><br>**ಶೈಕ್ಷಣಿಕಧನಸಹಾಯ:**<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿ ಪೂರ್ವ ತರಗತಿಯವರೆಗೆ ವ್ಯಾಸಂಗ ಮಾಡಲು |

ವಾರ್ಷಿಕ ತಲಾ ರೂ.**10,000/**-ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ.

- **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**

ಈ ಯೋಜನೆಯಡಿ ಅಸಂಘಟಿತ ವಲಯದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರು ಹಾಗೂ ಅಲೆಮಾರಿ ಹಾಗೂ ಅರೆ ಅಲೆಮಾರಿ ಪಂಗಡದ ಕುಲಕಸುಬಿನ ವೃತ್ತಿ ಆಧಾರಿತ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು ಸೇರಿದಂತೆ ಒಟ್ಟಾರೆ 102 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ, ಈ ಕೆಳಕಂಡ ಸೌಲಭ್ಯಗಳನ್ನೊಳಗೊಂಡಂತೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ.

**(ಅ) ಅಪಘಾತ ಪರಿಹಾರ ಸೌಲಭ್ಯ:**

- ಮರಣ ಪ್ರಕರಣ _ ರೂ. 1.00 ಲಕ್ಷದವರೆಗೆ ಅಪಘಾತ ಪರಿಹಾರ.
- ಅಪಘಾತದಿಂದ ಉಂಟಾಗುವ ಸಂಪೂರ್ಣ ಶಾಶ್ವತ/ ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) - ರೂ. 1.00 ಲಕ್ಷದವರೆಗೆ ಪರಿಹಾರ.
- ಆಸ್ಪತ್ರೆ ವೆಚ್ಚ ಮರುಪಾವತಿ - ರೂ. 50,000/- ದವರೆಗೆ.

**(ಆ) ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ):**

ನೋಂದಾಯಿತ ಫಲಾನುಭವಿಯು ವಯೋಸಹಜ/ಖಾಯಿಲೆ/ ಅಕಾಲಿಕ ಅಥವಾ ಇನ್ನಿತರೆ ಕಾರಣಗಳಿಂದ ಮರಣ ಹೊಂದಿದ್ದಲ್ಲಿ ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ.10,000/-ಗಳ ಧನಸಹಾಯ ಸೌಲಭ್ಯ.

**ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:-**

ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಿಗ್ಗಿ, ಜೊಮಾಟೋ ಗಳಂತಹ ಸಂಸ್ಥೆಗಳಲ್ಲಿ ಫುಡ್‌ಡೆಲಿವರಿ ಮಾಡುವ ಹಾಗೂ ಮುಂತಾದ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಎಲ್ಲಾ ಅಸಂಘಟಿತ ಗಿಗ್ ಕಾರ್ಮಿಕರು ಸೇವಾ ಸಿಂಧು ಹಾಗೂ ಇ-ಶ್ರಮ್ ಪೋರ್ಟಲ್ ಗಳ ಮೂಲಕ

ನೋಂದಾಯಿಸಿಕೊಂಡು ಈ ಕೆಳಕಂಡ ಯೋಜನೆಗಳನ್ನು ಒದಗಿಸಲಾಗುತ್ತಿದೆ.

**ಸೌಲಭ್ಯಗಳು:-**

- ಅಪಘಾತದಿಂದ ಮರಣ ಹೊಂದಿದ್ದಲ್ಲಿ ಅಪಘಾತ ವಿಮಾ ಪರಿಹಾರ ರೂ2.00 ಲಕ್ಷ ಹಾಗೂ ರೂ 2.00 ಲಕ್ಷ ಜೀವ ವಿಮಾ ಸೇರಿ ಒಟ್ಟು ರೂ.4.00 ಲಕ್ಷಗಳು.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ
- ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)
- ಜೀವ ವಿಮಾ ರೂ.2.00 ಲಕ್ಷಗಳು

ಮುಂದುವರೆದು, ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಸಂಪನ್ಮೂಲ ಕ್ರೋಢೀಕರಿಸಲು Karnataka Platform based Gig Workers (Social Security and Welfare) Act, 2025 ಅನ್ನು **ದಿನಾಂಕ: 12-09-2025** ರಂದು ಸರ್ಕಾರವು ಅಧಿಸೂಚಿಸಿರುತ್ತದೆ ಮತ್ತು ಇದಕ್ಕನುಗುಣವಾಗಿ ನಿಯಮಾವಳಿಯನ್ನು **ದಿನಾಂಕ: 19-11-2025** ರಂದು ಅಧಿಸೂಚಿಸಲಾಗಿ ಮಂಡಳಿಯನ್ನು ರಚಿಸಲಾಗಿರುತ್ತದೆ. ಈ ಕಾಯ್ದೆಯಡಿ ಸುಂಕದ ರೂಪದಲ್ಲಿ ಸಂಗ್ರಹ ವಾಗಬಹುದಾದ ಅನುದಾನದಿಂದ ಮುಂದಿನ ದಿನಗಳಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲಾಗುವುದು.

**(4)ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:-**

ಈ ಯೋಜನೆಯಡಿ ದಿನಪತ್ರಿಕೆ ಹಾಗೂ ಹಾಲು ವಿತರಿಸುವ ಕಾರ್ಮಿಕರಿಗೆ ಅಪಘಾತದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ, ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) ಹಾಗೂ ಅಪಘಾತ/ ಮಾರಣಾಂತಿಕ ಕಾಯಿಲೆ/ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಹಾಗೂ ಸಹಜ ಮರಣ ಪ್ರಕರಣಗಳಲ್ಲಿ ರೂ.10,000/- ಧನ ಸಹಾಯ ಒದಗಿಸಲಾಗುತ್ತಿದೆ.

| | | |
|---|---|---|
| | | **(5)ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**<br><br>ಅಸಂಘಟಿತ ವರ್ಗದ ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, "ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿರುತ್ತದೆ. ಈ ಕಾಯ್ದೆಯಡಿ ಸಂಗ್ರಹವಾಗಬಹುದಾದ ಅನುದಾನದಿಂದ ಅರ್ಹ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲು ಪ್ರಸ್ತಾಪಿಸಲಾಗಿದೆ.<br><br>• **ದೊರಕುವ ಸೌಲಭ್ಯಗಳು:**<br><br>**(ಅ) ಅಪಘಾತ ಪರಿಹಾರ ಸೌಲಭ್ಯ:**<br><br>• ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5.00 ಲಕ್ಷಗಳ ಪರಿಹಾರ.<br>• ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2.00 ಲಕ್ಷಗಳವರೆಗೆ ಪರಿಹಾರ.<br>• ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷದವರೆಗೆ.<br><br>**(ಆ) ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯ ಸಂಸ್ಕಾರ ವೆಚ್ಚ:**<br>ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ. |

| | | |
|---|---|---|
| | | **(ಇ) ಶೈಕ್ಷಣಿಕ ಧನಸಹಾಯ :**<br>**ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**<br>• 12ನೇ ತರಗತಿ ಅಥವಾ ತತ್ಸಮಾನ – ವಾರ್ಷಿಕ ತಲಾ ರೂ.3,000/-<br>• ಪದವಿ ಅಥವಾ ತತ್ಸಮಾನ – ವಾರ್ಷಿಕ ತಲಾ ರೂ.5,500/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ – ವಾರ್ಷಿಕ ತಲಾ ರೂ. 8,000/-<br>• ಸ್ನಾತಕೋತ್ತರ ಪದವಿ – ವಾರ್ಷಿಕ ತಲಾ ರೂ.11,000/-<br>**ಅಪಘಾತದಿಂದ ನಿಧನರಾದ / ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**<br>• 1ನೇತರಗತಿಯಿಂದ ಪದವಿ ಅಥವಾ ತತ್ಸಮಾನ – ವಾರ್ಷಿಕ ತಲಾ ರೂ.10,000/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ – ವಾರ್ಷಿಕ ತಲಾ ರೂ.20,000/-<br>• ಸ್ನಾತಕೋತ್ತರ ಪದವಿ – ವಾರ್ಷಿಕ ತಲಾ ರೂ.25,000/-<br>**(ಈ) ಹೆರಿಗೆ ಸಹಾಯ ಧನ:**<br>ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/- ಗಳು. |
| ಇ) | ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಗಾರ್ಮೆಂಟ್ಸ್ ನಲ್ಲಿ ಕೆಲಸ ಮಾಡುವ ನೌಕರರಿಗೂ ಕಲ್ಯಾಣ ಕಾರ್ಯಕ್ರಮದ ಪ್ರಯೋಜನ ನೀಡಲಾಗುತ್ತಿದೆಯೇ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುವ ಸಂಘಟಿತ ಕಾರ್ಮಿಕರು ಮಂಡಳಿಗೆ ವಂತಿಕೆ ಪಾವತಿಸುವುದರಿಂದ ಸದರಿ ಸಂಘಟಿತ ಕಾರ್ಮಿಕರಿಗೂ ಕಲ್ಯಾಣ ಕಾರ್ಯಕ್ರಮದ ಪ್ರಯೋಜನ ನೀಡಲಾಗುತ್ತಿದೆ. |
| ಈ) | ಕಾರ್ಮಿಕ ಕಲ್ಯಾಣ ಮಂಡಳಿಗೆ ಯಾವ ಯಾವ ಮೂಲಗಳಿಂದ ಸಂಪನ್ಮೂಲ ವನ್ನು ಕ್ರೋಢಿಕರಿಸಲಾಗಿದೆ; (ಮಾಹಿತಿ ಒದಗಿಸುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಈ ಕೆಳಕಂಡ ಮೂಲಗಳಿಂದ ಸಂಪನ್ಮೂಲವನ್ನು ಕ್ರೋಢಿಕರಿಸ ಲಾಗುವುದು.<br>1. ನಿಯೋಜಿತರಿಂದ ವಸೂಲಿ ಮಾಡಿದ ಎಲ್ಲಾ ಜುಲ್ಮಾನೆಗಳು<br>2. ವಂತಿಕೆ ಪಾವತಿಯಲ್ಲಿ ವಿಳಂಬಕ್ಕೆ ದಂಡ ವಸೂಲಿ<br>3. ಸರ್ಕಾರದ ವಂತಿಕೆ ಮೊತ್ತ |

| | | |
|---|---|---|
| | | 4. ಸಮುದಾಯ ಭವನಗಳ ಕಾರ್ಯಕ್ರಮಗಳಿಂದ ಬಂದ ಬಾಡಿಗೆ ಮೊತ್ತ<br>5. ಸಮುದಾಯ ಭವನಗಳ ಬಾಡಿಗೆ ಮೊತ್ತ<br>6. ಮಂಡಳಿಯ ಬ್ಯಾಂಕ್ ಖಾತೆಗಳಿಂದ ಬಂದ ಎಸ್. ಬಿ/ಎಫ್.ಡಿ ಬಡ್ಡಿ ಮೊತ್ತ<br>7. ಸಂಘಟಿತ ಕಾರ್ಮಿಕರು ಮತ್ತು ಮಾಲೀಕರು ಮಂಡಳಿಗೆ ಪಾವತಿಸುವ ವಂತಿಕೆ ಮೊತ್ತ. |
| ಉ) | ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ ಇರುವ ಮೊತ್ತ ವೆಷ್ಟು? (ಮಾಹಿತಿ ಒದಗಿಸುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ **ರೂ.7762.11** ಕೋಟಿಗಳಷ್ಟು ಮೊತ್ತ ಇರುತ್ತದೆ. |

**ಕಾಇ 167 ಎಲ್ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಟಿ. ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2367 (2089) ಕ್ಕೆ**

## ಅನುಬಂಧ

**ಮಂಡಳಿಯ ವತಿಯಿಂದ ಫಲಾನುಭವಿಗಳು ಮತ್ತು ಅವಲಂಭಿತರಿಗೆ ನೀಡುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೇನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.
9. **ಶೈಕ್ಷಣಿಕ ಸಹಾಯಧನ:**

| ಕ್ರ. ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | 1,800/- | - |
| 2 | 6ನೇ ತರಗತಿಯಿಂದ 8ನೇ ತರಗತಿ | 2,400/- | - |
| 3 | 9 ಮತ್ತು 10ನೇ ತರಗತಿ | 3,000/- | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | 6,000/- | - |
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | 10,000/- | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | 12,000/- | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವುಗಳು | 15,000/- | 20,000/- |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ Vocational ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | 20,000/- | 25,000/- |
| 9 | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | 20,000/- | 25,000/- |
| 11 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |

| | | | |
|---|---|---|---|
| 12 | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | 40,000/- | 50,000/- |
| 13 | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | 40,000/- | - |
| 14 | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | 50,000/- | 60,000/- |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**
14. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.
15. **ಸುರಕ್ಷತಾ ಕಿಟ್:** ನೋಂದಾಯಿತ ಕಾರ್ಮಿಕರ ವೃತ್ತಿಗನುಗುಣವಾಗಿ ಸುರಕ್ಷತಾ ಕಿಟ್‌ಗಳ ವಿತರಣೆ
16. **ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮಾಡುವ ಮೂಲಕ ಅವಶ್ಯಕ ಔಷಧೋಪಚಾರಗಳ ವಿತರಣೆ
17. **ಪ್ರೀವೆಂಟಿವ್ ಹೆಲ್ತ್ ಕೇರ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯದ ಮುನ್ನೆಚ್ಚರಿಗಾಗಿ ನಿಗಧಿತ 23 ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ವೈದ್ಯಕೀಯ ವರದಿಗಳ ವಿತರಣೆ

ಆಯುಕ್ತರು
ಕಾರ್ಮಿಕ ಇಲಾಖೆ